ಸಂಖ್ಯೆ:ಆಇ 772 ವೆಚ್ಚ-12/2023

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನ ಸೌಧ, ಡಾ|| ಬಿ.ಆರ್.ಅಂಬೇಡ್ಕರ್ ವೀಧಿ,
ಬೆಂಗಳೂರು, ದಿನಾಂಕ:13.07.2026.

ಅಧಿಸೂಚನೆ

ರಾಜ್ಯದ ಸಂಗ್ರಹಣಾ ಪ್ರಾಧಿಕಾರಗಳು ಡಾ:ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿ.. (ಲಿಡ್‌ಕರ್) ಸಂಸ್ಥೆಯಿಂದ ತಯಾರಿಸುವ ಚರ್ಮದ ಉತ್ಪನ್ನಗಳನ್ನು ಮಾತ್ರ ಗರಿಷ್ಠ ರೂ.1.00 ಕೋಟಿಗಳ ವೆಚ್ಚದಲ್ಲಿ ಒಂದು ವರ್ಷದ ಅವಧಿಗೆ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ನೇರವಾಗಿ ಸಂಗ್ರಹಣೆ ಮಾಡಿಕೊಳ್ಳಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ-1999ರ ಕಲಂ 4(ಜಿ)ರಡಿ ಪ್ರದತ್ತವಾದ ಅಧಿಕಾರ ಚಲಾಯಿಸಿ ಸಂಗ್ರಹಣಾ ಪ್ರಾಧಿಕಾರಗಳಿಗೆ ಪಾರದರ್ಶಕತೆ ಕಾಯ್ದೆಯಿಂದ ವಿನಾಯಿತಿ ನೀಡಿದೆ.

ಷರತ್ತುಗಳು:

1. ಲಿಡ್‌ಕರ್ ಸಂಸ್ಥೆಯು ತನ್ನ ಆಂತರಿಕ ಸಂಪನ್ಮೂಲಗಳನ್ನು ಮಾತ್ರ ಬಳಸಿ ಪ್ರಸ್ತಾಪಿತ ಚರ್ಮದ ಉತ್ಪನ್ನಗಳನ್ನು ಮಾತ್ರ ತಯಾರಿಸಿ ಪೂರೈಕೆ/ಸರಬರಾಜು ಮಾಡುವುದನ್ನು ಸಂಗ್ರಹಣಾ ಪ್ರಾಧಿಕಾರಗಳು ಖಾತರಿಪಡಿಸಿಕೊಳ್ಳತಕ್ಕದ್ದು.
2. ಲಿಡ್‌ಕರ್ ಸಂಸ್ಥೆಯು ಚರ್ಮದ ಉತ್ಪನ್ನಗಳ ನಿಗದಿತ ಎಲ್ಲಾ ಗುಣಮಟ್ಟವನ್ನು ಕಾಪಾಡತಕ್ಕದ್ದು.
3. ಉತ್ತಮ ಗುಣಮಟ್ಟದ ಸೇವೆಯನ್ನು ಸಮಂಜಸ ದರದಲ್ಲಿ ಸಂಗ್ರಹಿಸುವುದನ್ನು ಸಂಗ್ರಹಣಾ ಪ್ರಾಧಿಕಾರಗಳು ದೃಢಪಡಿಸಿಕೊಳ್ಳುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

ಕಾಂತಮ್ಮ ಎನ್.ಎಂ
(ಕಾಂತಮ್ಮ ಎನ್.ಎಂ)
ಸರ್ಕಾರದ ಅಧೀನ ಕಾರ್ಯದರ್ಶಿ
ಆರ್ಥಿಕ ಇಲಾಖೆ (ಸಂಗ್ರಹಣಾ ಕೋಶ)
13/7

ಇವರಿಗೆ:

ಜಂಟಿ ನಿರ್ದೇಶಕರು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಮುದ್ರಣಾಲಯ, ಆರ್.ವಿ.ಕಾಲೇಜು ಅಂಚೆ, ಮೈಸೂರು ರಸ್ತೆ, ಕೆಂಗೇರಿ, ಬೆಂಗಳೂರು-59, ಮುಂದಿನ ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸುವ ಸಲುವಾಗಿ ಹಾಗೂ 25 ಮುದ್ರಿತ ಪ್ರತಿಗಳನ್ನು ಸರಬರಾಜು ಮಾಡಲು ಕೋರಿದೆ.

ಪ್ರತಿ:

1. ಮಹಾಲೇಖಪಾಲರು (ಲೆಕ್ಕ ಮತ್ತು ಪರಿಶೋಧನೆ), ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ.
3. ರಾಜ್ಯ ಪತ್ರಾಗಾರ ಇಲಾಖೆ, ವಿಕಾಸಸೌಧ, ಬೆಂಗಳೂರು-10 ಪ್ರತಿಗಳು.
4. ಹೆಚ್ಚುವರಿ ಪ್ರತಿಗಳು.

Scanned with CamScanner